*ರಾಜ್ಯದಲ್ಲಿ ಹೊಸದಾಗಿ ಬಿ.ಎಡ್ ಹಾಗೂ ಬಿ.ಪಿ.ಇಡಿ ಕಾಲೇಜು ಮಂಜೂರಾತಿ*

2497 (3349) ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) :— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೊಸದಾಗಿ ಬಿಎಡ್ ಮತ್ತು ಬಿಪಿಇಡಿ ಶಿಕ್ಷಕರ ತರಬೇತಿ ಕೇಂದ್ರಗಳನ್ನು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಮಂಜೂರು ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಮತ್ತು ಎಷ್ಟು ಕೇಂದ್ರಗಳನ್ನು ಮಂಜೂರು ಮಾಡಲಾಗುವುದು;

ಇ) ಈ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡುವಲ್ಲಿ ಸರ್ಕಾರ ಯಾವುದಾದದರೂ ನೀತಿ ನಿಯಮಗಳನ್ನು ರೂಪಿಸಿದೆಯೇ; ಹಾಗಿದ್ದಲ್ಲಿ, ಪ್ರತಿಯನ್ನು ಒದಗಿಸುವುದು;

ಈ) ಈ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡುವಲ್ಲಿ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು?

ಡಾ: ಪರಮೇಶ್ವರಪ್ಪ (ಉನ್ನತ ಶಿಕ್ಷಣ ಸಚಿವರು) :—

ಅ) -ಇಲ್ಲ-
ಜಾರಿಯಲ್ಲಿರುವ ನಿಷೇಧವನ್ನು ದಿ.31-3-2006 ರವರೆಗೆ ಮುಂದುವರಿಸಲಾಗಿದೆ.

ಆ) ಉದ್ಭವಿಸುವುದಿಲ್ಲ

ಇ) ಅನ್ವಯಿಸುವುದಿಲ್ಲ

ಈ) ಅನ್ವಯಿಸುವುದಿಲ್ಲ

*ರಾಜ್ಯದಲ್ಲಿ ಹೊಸದಾಗಿ ಟಿ.ಸಿ.ಎಚ್./ಸಿ.ಪಿ.ಎಡ್ ಕಾಲೇಜು ಆರಂಭಿಸುವ ಬಗ್ಗೆ*

2498 (3350) ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೊಸದಾಗಿ *ಟಿ.ಸಿ.ಎಚ್.* ಮತ್ತು *ಸಿ.ಪಿ.ಇಡಿ* ಶಿಕ್ಷಕರ ತರಬೇತಿ ಕೇಂದ್ರಗಳನ್ನು ಖಾಸಗಿ ಕಾಲೇಜುಗಳಿಗೆ ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?

ಅ) ಹಾಗಿದಲ್ಲಿ ಯಾವಾಗ ಎಷ್ಟು ಕಾಲೇಜುಗಳನ್ನು ಮಂಜೂರು ಮಾಡಲಾಗುವುದು?

ಇ) ಈ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡಲು ಸರ್ಕಾರ ಯಾವುದಾದರೂ ನೀತಿ ನಿಯಮವನ್ನೇನಾದರೂ ರೂಪಿಸಿದೆಯೇ; (ಹಾಗಿದ್ದಲ್ಲಿ ಪ್ರತಿಯನ್ನು ಒದಗಿಸುವುದು)

ಈ) ಈ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡುವಲ್ಲಿ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ರಾಜ್ಯದಲ್ಲಿ ಹೊಸದಾಗಿ ಶಿಕ್ಷಕ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾಪವಿದೆ.

ಆ), ಇ), ಈ) ಹೊಸದಾಗಿ ಶಿಕ್ಷಕರ ತರಬೇತಿ ಸಂಸ್ಥೆಗಳನ್ನು ಮಂಜೂರು ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು ರಚಿಸಲಾಗುತ್ತಿದ್ದು, ಅದರಂತೆ ಕ್ರಮ ಕೈಗೊಳ್ಳಲಾಗುವುದು.

ಹಾಲಿ ಇರುವ ಶಾಲಾಬಿವೃದ್ಧಿ ಸಮಿತಿಗಳನ್ನು ಪುನರ್ ರಚನೆ ಮಾಡುವುದು

2499 (3353) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹಾಲಿ ಇರುವ ಶಾಲಾಭಿವೃದ್ಧಿ ಸಮಿತಿಗಳನ್ನು ಪುನರ್ ರಚಿಸಲಾಗುವುದೇ?

ಆ) ಹಾಗಿದಲ್ಲಿ, ಇದಕ್ಕೆ ಕಾರಣಗಳೇನು?

ಇ) ಪುನರ್‌ರಚನೆ ಮಾಡಲು ಯಾವ ಮಾರ್ಗಸೂಚಿಗಳನ್ನು ಅನುಸರಿಸಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಈ ಹಿಂದೆ ಇದ್ದ ಶಾಲಾ ಅಭಿವೃದ್ಧಿ ಸಮಿತಿಗಳ ಬದಲು ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಗಳ ರಚನೆಗೆ ಸರ್ಕಾರವು ಆದೇಶ ಸಂಖ್ಯೆ : ಇಡಿ ೫೧ : ಪಿಬಿಎಸ್ : ೨೦೦೧ ದಿನಾಂಕ : ೨೮-೪-೨೦೦೧ರಲ್ಲಿ ಅನುಮತಿ ನೀಡಿದೆ.

ಆ) ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಪಾತ್ರವನ್ನು ಖಚಿತಪಡಿಸಲು ಶಾಲಾಭಿವೃದ್ಧಿ ಸಮಿತಿಗಳನ್ನು ರಚಿಸಲಾಗುತ್ತಿದೆ.